ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: Court matter

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 18/12/19

# ಪೊಲೀಸ್ ದೌರ್ಜನ್ಯ ವಿಚಾರಣೆಗೆ ಸುಪ್ರೀಂ ನಕಾರ

ನವದೆಹಲಿ: ಪೌರತ್ವ ಕಾಯ್ದೆ ತಿದ್ದುಪಡಿ ವಿರುದ್ಧ ಚಳವಳಿಯ ಸಂದರ್ಭದಲ್ಲಿ ಜಾಮಿಯಾ ಮಿಲಿಯಾ ಮತ್ತು ಅಲಿಗಡ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದರೆನ್ನಲಾದ ದೌರ್ಜನ್ಯದ ಕುರಿತು ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಈ ವಿಚಾರವಾಗಿ ಸಂಬಂಧಪಟ್ಟ ಹೈಕೋರ್ಟ್‌ಗಳನ್ನು ಸಂಪರ್ಕಿಸುವಂತೆ ಅರ್ಜಿದಾರರಿಗೆ ಸೂಚಿಸಲಾಗಿದೆ.

"ವಾಸ್ತವವಾಗಿ ನಡೆದ ಸಂಗತಿಗಳ ಬಗ್ಗೆ ತಿಳಿದುಕೊಳ್ಳಲು ನಾವು ಸಮಯ ವಿನಿಯೋಗಿಸಲು ಸಾಧ್ಯವಿಲ್ಲ, ನೀವು ಮೊದಲು ಕೆಳಹಂತದ ನ್ಯಾಯಾಲಯಗಳನ್ನು ಸಂಪರ್ಕಿಸಿ, ಹೈಕೋರ್ಟ್‌ಗಳು ಸತ್ಯ ಶೋಧನಾ ಸಮಿತಿಗಳನ್ನು ರಚಿಸಬಹುದು" ಎಂದು ಮುಖ್ಯ ನ್ಯಾಯಮೂರ್ತಿ ಎಸ್.ಎ.ಬೋಬ್ಡೆ ನೇತೃತ್ವದ ಪೀಠ ಸ್ಪಷ್ಟಪಡಿಸಿತು.

ದೊಂಬಿ ನಿಲ್ಲಿಸಿ ಮೊದಲು ಶಾಂತಿ ಕಾಪಾಡಿ ಎಂದು ಸೋಮವಾರ ತಾಕೀತು ಮಾಡಿದ್ದ ಸಿಜೆಐ ಮರುದಿನದ ವಿಚಾರಣೆ ವೇಳೆ "ಆಸ್ತಿಪಾಸ್ತಿ ನಾಶ ಮಾಡುತ್ತಿರುವುದೇಕೆ? ಬಸ್‌ಗಳನ್ನು ಸುಟ್ಟಿದ್ದೇಕೆ? ದೊಂಬಿ ಆರಂಭಿಸಿದವರು ಮೊದಲು ಅದನ್ನು ನಿಲ್ಲಿಸಲಿ, ಬಳಿಕ ಪರಿಸ್ಥಿತಿಯನ್ನು ಅವಲೋಕಿಸಿ ಶಾಂತ ಮನಸ್ಥಿತಿಯಲ್ಲಿ ತೀರ್ಮಾನಿಸುತ್ತೇವೆ" ಎಂದು ನ್ಯಾ.ಬೋಬ್ಡೆ ಅರ್ಜಿದಾರರ ಪರ ವಕೀಲರನ್ನು ತರಾಟೆಗೆ ತೆಗೆದುಕೊಂಡರು.

ಕಳೆದ ಭಾನುವಾರ ದೆಹಲಿ ಪೊಲಿಸರು ಜಾಮಿಯಾ ವಿಶ್ವವಿದ್ಯಾಲಯದ ಕ್ಯಾಂಪಸ್‌ಗೆ ನುಗ್ಗಿ ನೂರಕ್ಕೂ ಹೆಚ್ಚು ಚಳವಳಿಕಾರರನ್ನು ವಶಕ್ಕೆ ತೆಗೆದುಕೊಂಡಿದ್ದರು. ಆಗ ವಿದ್ಯಾರ್ಥಿಗಳ ಮೇಲೆ ಹಿಂಸೆ ಹಾಗೂ ದಬ್ಬಾಳಿಕೆ ನಡೆಸಲಾಗಿದೆ ಎಂದು ಆರೋಪಿಸಲಾಗಿದೆ. ಉತ್ತರ ಪ್ರದೇಶದ ಅಲಿಗಡ ಮುಸ್ಲಿಂ ವಿಶ್ವವಿದ್ಯಾಲಯದಲ್ಲೂ ಪೊಲೀಸರು ದೌರ್ಜನ್ಯವೆಸಗಿದ್ದಾರೆಂದು ದೂರಲಾಗಿದೆ.